All India Radio: Bangalore
National Bulletin In Kannada
10.02.2025 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**<><><><>**

ಮುಖ್ಯಾಂಶಗಳು

- ಬೆಂಗಳೂರಿನಲ್ಲಿಂದು ೧೫ನೇ ಆವೃತ್ತಿಯ ಏರೋ ಇಂಡಿಯಾ ೨೦೨೫ ಪ್ರದರ್ಶನಕ್ಕೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಚಾಲನೆ
- ಪ್ರಧಾನಿ ನರೇಂದ್ರ ಮೋದಿ ಅವರಿಂದ ಇಂದು ಪರೀಕ್ಷಾ ಪೇ ಚರ್ಚಾ: ವಿದ್ಯಾರ್ಥಿಗಳು, ಪೋಷಕರು, ಶಿಕ್ಷಕರೊಂದಿಗೆ ಸಂವಾದ
- ಫ್ರಾನ್ಸ್, ಅಮೆರಿಕ ಭೇಟಿಗಾಗಿ ಇಂದು ಪ್ರಧಾನಿ ಪ್ರಯಾಣ; ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ
- ಪ್ರಯಾಗ್‌ರಾಜ್‌ನ ಮಹಾಕುಂಭ ಮೇಳಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಭೇಟಿ; ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ
- ಏಕದಿನ ಕ್ರಿಕೆಟ್: ಇಂಗ್ಲೆಂಡ್ ವಿರುದ್ಧ ಭಾರತಕ್ಕೆ ೪ ವಿಕೆಟ್ ಜಯ

<><><><>

ಬೆಂಗಳೂರಿನ ಯಲಹಂಕದ ವಾಯು ನೆಲೆಯಲ್ಲಿ ಏಷ್ಯಾದ ಅತಿದೊಡ್ಡ ಏರ್‌ಶೋ -೧೫ನೇ ಆವೃತ್ತಿಯ ಏರೋ ಇಂಡಿಯಾ ೨೦೨೫ ಪ್ರದರ್ಶನಕ್ಕೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ಚಾಲನೆ ನೀಡಲಿದ್ದಾರೆ. ಕಾರ್ಯಕ್ರಮದ ಮೊದಲ ಮೂರು ದಿನಗಳು ವಾಣಿಜ್ಯ ವ್ಯವಹಾರದ ದಿನಗಳಾಗಿದ್ದು, ೧೩ ಮತ್ತು ೧೪ ರಂದು ಪ್ರದರ್ಶನವನ್ನು ಸಾರ್ವಜನಿಕರು ವೀಕ್ಷಿಸಲು ಅನುವು ಮಾಡಿಕೊಡಲಾಗಿದೆ.

ಈ ಕುರಿತು ಒಂದು ವರದಿ: (೩೫ ಸೆಕೆಂಡ್ಸ್)

ಕರ್ನಾಟಕದ ರಾಜಧಾನಿಯಲ್ಲಿ ಇಂದಿನಿಂದ ಲೋಹದ ಹಕ್ಕಿಗಳ ಕಲರವ.

ಜನಮನ ಸೆಳೆಯುವ ಈ  ಏರ್ ಶೋನಲ್ಲಿ ಸೂರ್ಯ ಕಿರಣ್, ಸುಖೋಯ್ ಯುದ್ಧ ವಿಮಾನಗಳು, ಶತ್ರುಗಳ ವಿರುದ್ಧ ರಹಸ್ಯ ಕಾರ್ಯಾಚರಣೆ ನಡೆಸಬಲ್ಲ ೫ನೇ ತಲೆಮಾರಿನ ಅತ್ಯಾಧುನಿಕ ಯುದ್ಧ ವಿಮಾನಗಳಾದ ರಷ್ಯಾದ 'ಎಸ್‌ಯು-೫೭', ಅಮೆರಿಕದ 'ಎಫ್-೩೫' ತಮ್ಮ ಸಾಮರ್ಥ್ಯವನ್ನು ಪ್ರದರ್ಶಿಸಲಿವೆ. ಈ ಬಾರಿಯ ಏರ್ ಶೋನಲ್ಲಿ ವಿವಿಧ ದೇಶಗಳು ಭಾಗವಹಿಸುತ್ತಿದ್ದು, ಮಾನವ ರಹಿತ ವೈಮಾನಿಕ ವ್ಯವಸ್ಥೆಗಳು, ಯುದ್ಧವಿಮಾನಗಳು, ಸುಧಾರಿತ ವೈಮಾನಿಕ ಹಾರಾಟ ಹಾಗೂ ರಕ್ಷಣಾ ತಂತ್ರಜ್ಞಾನದ ಪ್ರದರ್ಶನಕ್ಕೆ ಸಜ್ಜಾಗಿವೆ. ವಿವಿಧ ದೇಶಗಳ ಸಚಿವರ ನಿಯೋಗಗಳು, ವಾಯುಪಡೆಯ ಹಿರಿಯ ಅಧಿಕಾರಿಗಳು, ಉದ್ಯಮದ ಮುಖಂಡರು ಏರ್‌ಶೋನಲ್ಲಿ ಭಾಗವಹಿಸಲಿದ್ದಾರೆ.

<><><>

ಏರೋ ಇಂಡಿಯಾ ಪ್ರದರ್ಶನ ದೇಶವನ್ನು ಬಲಿಷ್ಠ, ಸಮರ್ಥ ಹಾಗೂ ಸ್ವಾವಲಂಬಿ ದೇಶವನ್ನಾಗಿಸುವ ಪ್ರಮುಖವಾದ ವೇದಿಕೆಯಾಗಿದೆ ಎಂದು ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಏರೋ ಇಂಡಿಯಾ ಭಾರತದ ರಕ್ಷಣಾ ಸಾಮರ್ಥ್ಯದ ಅನಾವರಣದೊಂದಿಗೆ ಸಹಭಾಗಿತ್ವದ ಬಲವರ್ಧಿಸಲಿದೆ ಎಂದರು. ರಕ್ಷಣೆ ಹಾಗೂ ವೈಮಾನಿಕ ಉದ್ದಿಮೆಗಳಲ್ಲಿ ಖಾಸಗಿ ಕ್ಷೇತ್ರವನ್ನು ಸಶಕ್ತಗೊಳಿಸಲು ಸಕ್ರಿಯವಾಗಿ ಕಾರ್ಯ ನಿರ್ವಹಿಸಲಾಗಿದೆ. ಈ ನಿಟ್ಟಿನಲ್ಲಿ ಅತ್ಯುತ್ತಮ ಸಾಧನೆ ಮಾಡಲಾಗಿದೆ. ದೇಶದ ಕ್ಷಿಪಣಿ ಅಭಿವೃದ್ಧಿ ಕಾರ್ಯಕ್ರಮ ಉನ್ನತ ಮಟ್ಟದಲ್ಲಿದೆ. ಕ್ಷಿಪಣಿ ತಂತ್ರಜ್ಞಾನದಲ್ಲಿ ಮಾಡಲಾದ ಯಶಸ್ಸು, ಸಾಧನೆ ಭಾರತವನ್ನು ರಕ್ಷಣಾ ಕ್ಷೇತ್ರದಲ್ಲಿ ಹೆಚ್ಚು ಸ್ವಾವಲಂಬಿಯನ್ನಾಗಿ ಮಾಡಿದೆ ಎಂದು ಹೇಳಿದರು. ಎಲ್‌ಸಿಎ ತೇಜಸ್, ಎಲ್‌ಸಿಹೆಚ್ ಪ್ರಚಂಡ್ ಮತ್ತು ಸಿ-೨೯೫ ಮೊದಲಾದ ಆಧುನಿಕ ವಿಮಾನಗಳನ್ನು ಭಾರತದಲ್ಲಿಯೇ ತಯಾರಿಸಲಾಗುತ್ತಿದೆ ಎಂದು ಹೇಳಿದರು. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ದೂರದರ್ಶಿತ್ವದಲ್ಲಿ ಇಡೀ ರಕ್ಷಣಾ ಕ್ಷೇತ್ರ, ಅದರಲ್ಲೂ ವಿಶೇಷವಾಗಿ ವೈಮಾನಿಕ ಕ್ಷೇತ್ರ ಹಿಂದೆಂದೂ ಕಾಣದ ಪ್ರಗತಿ ಕಂಡಿದೆ ಎಂದು ಹೇಳಿದರು. ದೇಶದ ರಕ್ಷಣಾ ಉತ್ಪನ್ನಗಳ ಪ್ರಮಾಣ ದಾಖಲೆಯ ಒಂದು ಕೋಟಿ ೨೭ ಲಕ್ಷ ರೂಪಾಯಿ ಗಡಿ ದಾಟಿದೆ.

೨೦೨೫-೨೬ರ ವೇಳೆಗೆ ಇದು ಒಂದು ಲಕ್ಷ ೬೦ ಸಾವಿರ ಕೋಟಿ ರೂಪಾಯಿ ದಾಟುವ ನಿರೀಕ್ಷೆಯಿದೆ ಎಂದು ಹೇಳಿದ ಅವರು, ರಕ್ಷಣಾ ಉತ್ಪನ್ನಗಳನ್ನು ಸ್ವಾವಲಂಬಿಯಾಗುವತ್ತ ಪಯಣ ಮುಂದುವರೆದಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಧ್ವನಿ : ರಾಜನಾಥ್ ಸಿಂಗ್ ( ೨೮ ಸೆಕೆಂಡ್ಸ್)

ಏರೋ ಇಂಡಿಯಾ ನೇಪಥ್ಯದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು, ಫಿಜಿ ರಕ್ಷಣಾ ಸಚಿವ ಪಿಯೊ ಟಿಕೊಡುವಾಡುವಾ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ರಕ್ಷಣಾ ಸಹಕಾರಕ್ಕಾಗಿ ಭಾರತ-ಫಿಜಿ ಜಂಟಿ ಕಾರ್ಯಪಡೆಯನ್ನು ಸಾಂಸ್ಥಿಕಗೊಳಿಸಲು ಉಭಯ ನಾಯಕರು ಪರಸ್ಪರ ಒಪ್ಪಿಗೆ ಸೂಚಿಸಿದರು. ಇದಕ್ಕೂ ಮುನ್ನ ರಾಜನಾಥ್ ಸಿಂಗ್ ಅವರು ದಕ್ಷಿಣ ಸುಡಾನ್ ರಕ್ಷಣಾ ಸಚಿವ ಲೆಫ್ಟಿನೆಂಟ್ ಜನರಲ್ ಚೋಲ್ ಥಾನ್ ಜೆ ಬಾಲೋಕ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ, ಇಂದು ಬೆಳಗ್ಗೆ ೧೧ ಗಂಟೆಗೆ ನವದೆಹಲಿಯ ಭಾರತ ಮಂಟಪಂನಲ್ಲಿ ಪರೀಕ್ಷಾ ಪೇ ಚರ್ಚಾ ಸಂವಾದ ಕಾರ್ಯಕ್ರಮ ನಡೆಸಲಿದ್ದಾರೆ. ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಕರು ಸಂವಾದದಲ್ಲಿ ಪಾಲ್ಗೊಳ್ಳಲಿದ್ದು, ಈ ವೇಳೆ ಪ್ರಧಾನಮಂತ್ರಿ ನರೇಂದ್ರ ಮೋದಿ, ಪರೀಕ್ಷಾ ಸಿದ್ಧತೆ, ಒತ್ತಡ ನಿರ್ವಹಣೆ ಮತ್ತು ವೈಯಕ್ತಿಕ ಬೆಳವಣಿಗೆ ಕುರಿತಂತೆ ಚರ್ಚೆ ನಡೆಸಲಿದ್ದಾರೆ. ಈ ವರ್ಷ ಪ್ರತಿ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶದಿಂದ ೩೬ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದ್ದು, ಇವರಲ್ಲಿ ಕಲಾ ಉತ್ಸವ ಮತ್ತು ವೀರ ಗಾಥಾ ಕಾರ್ಯಕ್ರಮದ ವಿಜೇತರೂ ಸೇರಿದ್ದಾರೆ. ಈ ಬಾರಿಯ ಪರೀಕ್ಷಾ ಪೇ ಚರ್ಚಾ ಹೊಸ ವಿನ್ಯಾಸದೊಂದಿಗೆ ೮ ಸಂಚಿಕೆಗಳಲ್ಲಿ ಮೂಡಿಬರುತ್ತಿದೆ. ಪ್ರಧಾನಮಂತ್ರಿಯವರ ನೇರ ಸಂವಾದ ಕಾರ್ಯಕ್ರಮವನ್ನು ಆಕಾಶವಾಣಿ, ದೂರದರ್ಶನ, ಸ್ವಯಂಪ್ರಭ, ಪ್ರಧಾನಮಂತ್ರಿ ಕಾರ್ಯಾಲಯದ ಅಧಿಕೃತ ಯುಟ್ಯೂಬ್ ಚಾನೆಲ್, ಶಿಕ್ಷಣ ಸಚಿವಾಲಯ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಸಾಮಾಜಿಕ ಜಾಲತಾಣಗಳಲ್ಲಿ ನೇರ ಪ್ರಸಾರ ಮಾಡಲಾಗುವುದು.

೨೦೧೮ರಲ್ಲಿ ಆರಂಭವಾದಾಗಿನಿಂದ ಪರೀಕ್ಷಾ ಪೇ ಚರ್ಚಾ ಒಂದು ರಾಷ್ಟ್ರವ್ಯಾಪಿ ಆಂದೋಲನವಾಗಿ ರೂಪುಗೊಂಡಿದೆ. ಅಲ್ಲದೇ ಈ ವರ್ಷದ ಆವೃತ್ತಿ ೫ ಕೋಟಿಗೂ ಹೆಚ್ಚಿನ ಭಾಗವಹಿಸುವಿಕೆ ಮೂಲಕ ಹಿಂದಿನ ಆವೃತ್ತಿಗಳ ದಾಖಲೆಯನ್ನು ಮುರಿದಿದೆ.

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ, ಉನ್ನತ ರಾಜತಾಂತ್ರಿಕ ಪ್ರವಾಸದ ಹಿನ್ನೆಲೆಯಲ್ಲಿ ಫ್ರಾನ್ಸ್ ಹಾಗೂ ಅಮೆರಿಕಕ್ಕೆ ಭೇಟಿ ನೀಡಲಿದ್ದಾರೆ. ಈ ಪ್ರವಾಸದ ಮೊದಲ ಚರಣದಲ್ಲಿ ಇಂದಿನಿಂದ ಇದೇ ೧೨ರವರೆಗೆ ಫ್ರಾನ್ಸ್‌ನಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ. ಇಂದು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರಾನ್ ಅವರೊಂದಿಗೆ ಕೃತಕ ಬುದ್ಧಿಮತ್ತೆ ಕ್ರಿಯಾ ಶೃಂಗಸಭೆ - ೨೦೨೫ರ ಅಧ್ಯಕ್ಷತೆ ವಹಿಸಲಿದ್ದಾರೆ. ನೈತಿಕ ಜವಾಬ್ದಾರಿಯೊಂದಿಗೆ ಆವಿಷ್ಕಾರಗಳ ಹೊಂದಾಣಿಕೆ ಮಾಡುವ ಜಾಗತಿಕ ಕೃತಕ ಬುದ್ಧಿಮತ್ತೆ ನೀತಿಗಳನ್ನು ರೂಪಿಸುವುದು ಈ ಶೃಂಗಸಭೆಯ ಉದ್ದೇಶವಾಗಿದೆ. ೧೦೦ಕ್ಕೂ ಹೆಚ್ಚು ದೇಶಗಳ ಸಂಶೋಧಕರು, ವ್ಯಾಪಾರ ಧುರೀಣರು, ಸಮಾಜದ ಪ್ರತಿನಿಧಿಗಳು ೨ ದಿನಗಳ ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದು, ಆಡಳಿತದ ಮೇಲೆ ಕೃತಕ ಬುದ್ಧಿಮತ್ತೆ ಪರಿಣಾಮ, ಆರ್ಥಿಕತೆ, ಮೂಲಭೂತಹಕ್ಕು, ಮೊದಲಾದವುಗಳ ಬಗ್ಗೆ ಚರ್ಚೆ ವಿಚಾರ ವಿನಿಮಯ ನಡೆಸಲಿದ್ದಾರೆ. ಈ ಕುರಿತು ಫ್ರಾನ್ಸ್‌ನಲ್ಲಿರುವ ಭಾರತದ ರಾಯಭಾರಿ ಸಂಜೀವ್ ಕುಮಾರ್ ಸಿಂಗ್ಲಾ ಮಾತನಾಡಿ, ಕೃತಕ ಬುದ್ಧಿಮತ್ತೆ ಕೆಲವೇ ಜನರ ಅಥವಾ ಕೆಲವೇ ಕಂಪನಿಗಳ ಸ್ವಾಮ್ಯವಾಗಬಾರದು ಎನ್ನುವುದು ಭಾರತದ ಪ್ರಾಥಮಿಕ ಕಾಳಜಿಯಾಗಿದೆ ಎಂದು ಹೇಳಿದ್ದಾರೆ. ನರೇಂದ್ರ ಮೋದಿಯವರು, ಮಾರ್ಸೇಲ್ಲಿಯಲ್ಲಿ ಭಾರತದ ಹೊಸ ದೂತವಾಸ ಕಚೇರಿಯನ್ನು ಉದ್ಘಾಟಿಸಲಿದ್ದಾರೆ. ಫ್ರಾನ್ಸ್ ಹಾಗೂ ಭಾರತದ ನಡುವಿನ ದ್ವಿಪಕ್ಷೀಯ ಸಂಬಂಧಗಳ ಬಗ್ಗೆಯೂ ಅಲ್ಲಿನ ವಿವಿಧ ಗಣ್ಯರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಫ್ರಾನ್ಸ್ ಭೇಟಿ ನಂತರ ಪ್ರಧಾನಿ ನರೇಂದ್ರ ಮೋದಿ, ಬುಧವಾರದಂದು ಎರಡು ದಿನಗಳ ಭೇಟಿಗಾಗಿ ಅಮೆರಿಕಕ್ಕೆ ತೆರಳಲಿದ್ದಾರೆ. ಅಮೆರಿಕದ ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ಪ್ರಧಾನಿ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ವ್ಯಾಪಾರ, ಕಾರ್ಯತಂತ್ರ ಸಹಕಾರ ಹಾಗೂ ತಂತ್ರಜ್ಞಾನ ಸಹಭಾಗಿತ್ವದ ಬಗ್ಗೆ ವಿಚಾರ ವಿನಿಮಯ ನಡೆಸಲಿದ್ದಾರೆ.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಇಂದು ಉತ್ತರ ಪ್ರದೇಶದ ಪ್ರಯಾಗ್‌ರಾಜ್ ಮಹಾಕುಂಭಕ್ಕೆ ಭೇಟಿ ನೀಡಲಿದ್ದಾರೆ. ಗಂಗಾ, ಯಮುನಾ, ಸರಸ್ವತಿ ನದಿಗಳ ತ್ರಿವೇಣಿ ಸಂಗಮದಲ್ಲಿ ಅವರು, ಪವಿತ್ರ ಸ್ನಾನ ಮಾಡಲಿದ್ದಾರೆ. ರಾಷ್ಟ್ರಪತಿಯವರು ಇದೇ ಸಂದರ್ಭದಲ್ಲಿ ಪ್ರಯಾಗ್‌ರಾಜ್‌ನಲ್ಲಿನ ಅಕ್ಷಯ್‌ವತ್ ಮತ್ತು ಬಡೇ ಹನುಮಾನ್ ಮಂದಿರಗಳಿಗೂ ಭೇಟಿ ನೀಡಲಿದ್ದಾರೆ. ಡಿಜಿಟಲ್ ಮಹಾಕುಂಭ ಎಕ್ಸ್‌ಪಿರಿಯನ್ಸ್ ಕೇಂದ್ರಕ್ಕೆ ಭೇಟಿ ನೀಡಿ, ಆಧುನಿಕ ತಂತ್ರಜ್ಞಾನದ ಮೂಲಕ ಮಹಾಕುಂಭದ ಆಳ-ಅಗಲವನ್ನು ಅನ್ವೇಷಿಸಲಿದ್ದಾರೆ. ಈ ಸಂದರ್ಭದಲ್ಲಿ ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಉಪಸ್ಥಿತರಿರಲಿದ್ದಾರೆ.

<><><><>

ರೈಲ್ವೆಯಲ್ಲಿ ೯೫ ಸಾವಿರ ಹೊಸ ಹುದ್ದೆಗಳು ಶೀಘ್ರದಲ್ಲೇ ಭರ್ತಿಯಾಗಲಿವೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಬಿಹಾರದ ಬೆಟ್ಟಯ್ಯ ಜಂಕ್ಷನ್‌ನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದಲ್ಲಿ ಇತ್ತೀಚೆಗೆ ನಡೆದ ಒಂದೂವರೆ ಲಕ್ಷ ರೈಲ್ವೆ ನೇಮಕಾತಿಗಳಿಗೆ ಹೆಚ್ಚುವರಿಯಾಗಿ ಈ ಹೊಸ ಉದ್ಯೋಗಗಳು ಲಭ್ಯವಾಗಲಿವೆ ಎಂದು ಮಾಹಿತಿ ನೀಡಿದ್ದಾರೆ. ನಮೋ ಮತ್ತು ವಂದೇ ಭಾರತ್ ರೈಲುಗಳಿಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಈ ರೈಲುಗಳ ಉತ್ಪಾದನೆಯನ್ನು ಹೆಚ್ಚಿಸಲು ರೈಲ್ವೆ ನಿರ್ಧರಿಸಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

<><><><>

ಮಣಿಪುರ ಮುಖ್ಯಮಂತ್ರಿ ಎನ್.ಬಿರೇನ್ ಸಿಂಗ್ ತಮ್ಮ ಸ್ಥಾನಕ್ಕೆ ನಿನ್ನೆ ರಾಜೀನಾಮೆ ನೀಡಿದ್ದಾರೆ. ಮಣಿಪುರ ರಾಜ್ಯಪಾಲ ಅಜಯ್ ಕುಮಾರ್ ಭಲ್ಲಾ ಅವರಿಗೆ ತಮ್ಮ ರಾಜೀನಾಮೆಯನ್ನು ಸಲ್ಲಿಸಿದ್ದಾರೆ. ೨೦೧೭ ರಿಂದ ಮಣಿಪುರದಲ್ಲಿ ಬಿಜೆಪಿ ಸರ್ಕಾರವನ್ನು ಮುನ್ನಡೆಸುತ್ತಿರುವ ಬಿರೇನ್ ಸಿಂಗ್, ರಾಜ್ಯದಲ್ಲಿ ನಡೆಯುತ್ತಿರುವ ರಾಜಕೀಯ ಬೆಳವಣಿಗೆಗಳು, ಅಶಾಂತಿ ಮತ್ತು ಪಕ್ಷದ ಆಂತರಿಕ ರಾಜಕೀಯದ ನಡುವೆ ರಾಜೀನಾಮೆ ನೀಡಿದ್ದಾರೆ.

<><><><>

ಒಡಿಶಾದ ಕಟಕ್‌ನಲ್ಲಿ ನಿನ್ನೆ ರಾತ್ರಿ ನಡೆದ ಮೂರು ಪಂದ್ಯಗಳ ಏಕದಿನ ಕ್ರಿಕೆಟ್ ಸರಣಿಯ ಎರಡನೇ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ೪ ವಿಕೆಟ್‌ಗಳಿಂದ ಜಯ ಗಳಿಸಿದ ಭಾರತ, ಸರಣಿಯನ್ನು ೨-೦ ಅಂತರದಿಂದ ತನ್ನದಾಗಿಸಿಕೊಂಡಿದೆ. ಇದು ತವರಿನಲ್ಲಿ ಇಂಗ್ಲೆಂಡ್ ವಿರುದ್ಧದ ಭಾರತದ ಸತತ ಏಳನೇ ಏಕದಿನ ಸರಣಿ ಗೆಲುವಾಗಿದೆ.

ಇಂಗ್ಲೆಂಡ್ ಒಡ್ಡಿದ ೩೦೫ ರನ್‌ಗಳ ಗೆಲುವಿನ ಗುರಿ ಬೆನ್ನಟ್ಟಿದ ಭಾರತ ತಂಡ, ೪೪.೩ ಓವರ್‌ಗಳಲ್ಲಿ ಆರು ವಿಕೆಟ್‌ಗಳಿಗೆ ೩೦೮ ರನ್ ಗಳಿಸಿ, ಜಯ ಸಾಧಿಸಿತು. ನಾಯಕ ರೋಹಿತ್ ಶರ್ಮಾ ೧೧೯ ರನ್, ಶುಭಮನ್ ಗಿಲ್ ೬೦ ರನ್ ಗಳಿಸಿದರು. ರೋಹಿತ್ ಶರ್ಮಾ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಇದಕ್ಕೂ ಮುನ್ನ ಮೊದಲು ಬ್ಯಾಟ್ ಮಾಡಿದ ಇಂಗ್ಲೆಂಡ್, ೪೯.೫ ಓವರ್‌ಗಳಲ್ಲಿ ೩೦೪ ರನ್‌ಗಳಿಗಳಿಗೆ ತನ್ನೆಲ್ಲಾ ವಿಕೆಟ್ ಕಳೆದುಕೊಂಡಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>